# All India Radio: Bangalore
# Regional Bulletin In Kannada
# 07.11.2025 / 2.30 p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

**ಮುಖ್ಯಾಂಶಗಳು**

**೧. ರಾಜ್ಯದ ಹಲವೆಡೆ ಕಬ್ಬು ಬೆಳೆಗಾರರ ಪ್ರತಿಭಟನೆ; ಕನ್ನಡಪರ ಸಂಘಟನೆಗಳಿಂದ ಬೆಳಗಾವಿ ಬಂದ್‌ಗೆ ಕರೆ**

**೨. ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಲು ಮುಖ್ಯಮಂತ್ರಿ ಸಭೆ; ಬೆಲೆ ನಿಗದಿ ಕುರಿತಂತೆ ರೈತರೊಂದಿಗೂ ಸಮಾಲೋಚನೆ**

**೩. ಹುಲಿ ದಾಳಿ ಹಿನ್ನೆಲೆ; ನಾಗರಹೊಳೆ, ಬಂಡೀಪುರ ಸಫಾರಿ ಸ್ಥಗಿತಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರ ಆದೇಶ**

**೪. ವಂದೇ ಮಾತರಂ ೧೫೦ನೇ ವಾರ್ಷಿಕೋತ್ಸವ ಹಿನ್ನೆಲೆ; ರಾಜ್ಯದ ವಿವಿಧೆಡೆ ಸಾಮೂಹಿಕ ಗಾಯನ**

**<><><><>**

ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ ವಿಜಯಪುರ, ಬಾಗಲಕೋಟೆ ಸೇರಿದಂತೆ ರಾಜ್ಯದ ಹಲವೆಡೆ ರೈತರ ಪ್ರತಿಭಟನೆ ಮುಂದುವರೆದಿದೆ. ಹುಬ್ಬಳ್ಳಿ, ಸೊಲ್ಲಾಪುರ -೨೧೮ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಕಬ್ಬಿಗೆ ಸೂಕ್ತ ಬೆಲೆಗೆ ಒತ್ತಾಯಿಸಿ ಕನ್ನಡಪರ ಸಂಘಟನೆಗಳು ಇಂದು ಬೆಳಗಾವಿ ಬಂದ್‌ಗೆ ಕರೆ ನೀಡಿವೆ. ನಗರದ ಚನ್ನಮ್ಮ ವೃತ್ತದಲ್ಲಿ ರಸ್ತೆ ತಡೆ ನಡೆಸಿ, ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು. ಈ ಮಧ್ಯೆ ಗೋಕಾಕ್ ಚಿಕ್ಕೋಡಿ, ಹುಕ್ಕೇರಿಯಲ್ಲಿ ರೈತರು ಕನ್ನಡಪರ ಸಂಘಟನೆಗಳು ಹಾಗೂ ನ್ಯಾಯವಾದಿಗಳು, ರೈತರ ಬೇಡಿಕೆಗೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ. ಮೂಡಲಗಿ ಸಮೀಪದ ಗುರ್ಲಾಪುರ ಕ್ರಾಸ್‌ನಲ್ಲಿ ರೈತರ ಅಹೋರಾತ್ರಿ ಪ್ರತಿಭಟನೆ ಮುಂದುವರೆದಿದೆ. ಇನ್ನೊಂದೆಡೆ ಬಾಗಲಕೋಟೆ ಜಿಲ್ಲೆಯಲ್ಲಿ ಕಬ್ಬಿಗೆ ಪ್ರತಿ ಟನ್‌ಗೆ ೩ ಸಾವಿರದ ೫೦೦ ರೂಪಾಯಿ ಬೆಲೆ ನೀಡಬೇಕೆಂದು ಆಗ್ರಹಿಸಿ ರೈತರು ನಡೆಸುತ್ತಿರುವ ಹೋರಾಟ ಇಂದು ತೀವ್ರ ಸ್ವರೂಪ ಪಡೆದುಕೊಂಡಿದೆ. ಬಾಗಲಕೋಟೆ ಜಿಲ್ಲೆಯ ಗದ್ದನಕೇರಿ ಕ್ರಾಸ್ ನಲ್ಲಿ ಹೆದ್ದಾರಿ ತಡೆದು ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಕಬ್ಬು ಬೆಳೆಗೆ ವೈಜ್ಞಾನಿಕ ಬೆಲೆ ನೀಡಬೇಕೆಂದು

ಆಗ್ರಹಿಸಿದ್ದಾರೆ. ರೈತರ ಪ್ರತಿಭಟನೆಯಲ್ಲಿ ಗುಳೇದಗುಡ್ಡ ಒಪ್ಪತ್ತೇಶ್ವರ ಸ್ವಾಮೀಜಿ ಕೂಡ ಭಾಗಿಯಾಗಿ ಬೆಂಬಲ ಸೂಚಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಳಗಾವಿ- ಗದ್ದನಕೇರಿ ಕ್ರಾಸ್ ಬಳಿ ರಸ್ತೆ ಸಂಚಾರ ಬಂದ್ ಮಾಡಲಾಗಿದೆ.

<><><><>

ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಸಭಾ ಹಾಗೂ ರಾಜ್ಯಸಭಾ ಸಂಸದರು ಮತ್ತು ಸಕ್ಕರೆ ಕಾರ್ಖಾನೆ ಅಧ್ಯಕ್ಷರುಗಳೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಎಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಶಿವಾನಂದ ಪಾಟೀಲ್, ಸತೀಶ್ ಜಾರಕಿಹಹೊಳಿ, ಆರ್.ಬಿ.ತಿಮ್ಮಾಪುರ, ಶರಣಪ್ರಕಾಶ್ ಪಾಟೀಲ್, ಪ್ರಿಯಾಂಕ್ ಖರ್ಗೆ, ಲಕ್ಷ್ಮೀ ಹೆಬ್ಬಾಳ್ಕರ್, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್, ಮಾಜಿ ಸಚಿವ ಮುರುಗೇಶ್ ನಿರಾಣಿ ಸೇರಿದಂತೆ ಹಲವರು ಭಾಗಿಯಾಗಿದ್ದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ, ರೈತ ಮುಖಂಡರುಗಳೊಂದಿಗೂ ಸಮಾಲೋಚನೆ ನಡೆಸುತ್ತಿದ್ದಾರೆ. ಸಭೆಯಲ್ಲಿ ತಮ್ಮ ಸಮಸ್ಯೆಯನ್ನು ಶೀಘ್ರವೇ ಬಗೆಹರಿಸುವಂತೆ ಮನವಿ ಮಾಡಿದ್ದಾರೆ.

<><><><>

ಕಬ್ಬು ಬೆಳೆಗಾರರ ಪ್ರತಿಭಟನೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರು ಹಾಗೂ ರೈತರ ಸಭೆ ಕರೆದಿದ್ದು, ಸಭೆಯಲ್ಲಿ ಸಮಸ್ಯೆ ಬಗೆಹರಿಯುವ ವಿಶ್ವಾಸವಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರಡ್ಡಿ ತಿಳಿಸಿದ್ದಾರೆ. ಧಾರವಾಡದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತಂತೆ ಚರ್ಚೆ ನಡೆಸಲಾಗಿದೆ. ಕಬ್ಬು ರೈತರದ್ದಾದರೂ , ಅದನ್ನ ಅರಿಯೋದು ಕಾರ್ಖಾನೆಯವರು. ಹೀಗಾಗಿ ದರ ನಿಗದಿಗೆ ಇಬ್ಬರು ಒಪ್ಪಬೇಕು ಎಂದು ಹೇಳಿದ್ದಾರೆ. ಈ ಕುರಿತಂತೆ ಸಮಸ್ಯೆ ಬಗೆಹರಿಸಲು ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆಯಲಿದ್ದಾರೆ ಎಂದು ತಿಳಿಸಿದರು.

<><><><>

ನಾಗರಹೊಳೆ ಮತ್ತು ಬಂಡೀಪುರ ಸಫಾರಿಯನ್ನು ಹಾಗೂ ಮಾನವ ವನ್ಯಜೀವಿ ಸಂಘರ್ಷ ಇರುವ ಪ್ರದೇಶದಲ್ಲಿ ಚಾರಣವನ್ನು ಇಂದಿನಿಂದಲೇ ಬಂದ್ ಮಾಡುವುದಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರ ಘೋಷಿಸಿದ್ದಾರೆ. ಇದೇ ವೇಳೆ ಸಿಬ್ಬಂದಿಯನ್ನು ಹುಲಿ ಸೆರೆ ಕಾರ್ಯಾಚರಣೆಗೆ ನಿಯೋಜಿಸುವಂತೆ ಸೂಚಿಸಿದ್ದಾರೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿರುವ ಅವರು, ಹುಲಿ ದಾಳಿಯಿಂದ ಚೌಡಯ್ಯ ನಾಯ್ಕ

ಎಂಬುವವರು ಮೃತಪಟ್ಟಿರುವ ಬಗ್ಗೆ ನೋವು ವ್ಯಕ್ತಪಡಿಸಿದ್ದಾರೆ. ಬಂಡೀಪುರ, ನಾಗರಹೊಳೆ ಸಫಾರಿ ಕಾರ್ಯದಲ್ಲಿ ನಿಯೋಜನೆಗೊಂಡಿರುವ ಎಲ್ಲಾ ಸಿಬ್ಬಂದಿಯನ್ನು ಹುಲಿ ಸೆರೆ ಕಾರ್ಯಾಚರಣೆಗೆ ನಿಯೋಜಿಸಿ, ಹುಲಿ ಯೋಜನೆಯ ನಿರ್ದೇಶಕರು ಸ್ಥಳದಲ್ಲೇ ಮೊಕ್ಕಾಂ ಹೂಡಿ, ವ್ಯಾಘ್ರನ ಸೆರೆ ಹಿಡಿಯುವಂತೆ ಸೂಚನೆ ನೀಡಿದ್ದಾರೆ.

<><><><>

ತುಮಕೂರು ಜಿಲ್ಲೆಯ ಬೀದರಕಟ್ಟೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ತುಮಕೂರು ವಿಶ್ವವಿದ್ಯಾಲಯದ 'ಜ್ಞಾನಸಿರಿ ಕ್ಯಾಂಪಸ್ ಹಾಗೂ ವಿವಿಧ ಕಟ್ಟಡಗಳನ್ನು' ಇಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಲೋಕಾರ್ಪಣೆ ಮಾಡಿದರು. ಬಳಿಕ ಮಾತನಾಡಿದ ಅವರು "ಜ್ಞಾನಸಿರಿ" ಎಂಬ ಹೆಸರು ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಮಾಜವನ್ನು ಬೆಳಗಿಸುವ, ನಿರಂತರವಾಗಿ ಹರಿಯುವ ಜ್ಞಾನದ ಪ್ರವಾಹವನ್ನು ಸಂಕೇತಿಸುತ್ತದೆ ಎಂದು ತಿಳಿಸಿದರು. ಈ ನೂತನ ಶೈಕ್ಷಣಿಕ ಕಟ್ಟಡ ಮತ್ತು ಕಲಾ ಕಟ್ಟಡವು ವಿಶ್ವವಿದ್ಯಾಲಯದ ಅಭಿವೃದ್ಧಿಯಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದು ಅಭಿಪ್ರಾಯಪಟ್ಟರು. ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಸ್ಥಾಪನೆ ಶ್ಲಾಘನೀಯವಾಗಿದೆ. ಈ ಕೇಂದ್ರವು ರಾಷ್ಟ್ರೀಯ ಸೇವೆಗೆ ಬದ್ಧರಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ನಿರ್ದೇಶನ ನೀಡಲಿದೆ ಎಂದು ಹೇಳಿದರು.

<><><><>

ವಂದೇ ಮಾತರಂನ ೧೫೦ ನೇ ವಾರ್ಷಿಕೋತ್ಸವದ ಅಂಗವಾಗಿ ನವದೆಹಲಿಯಲ್ಲಿ ವರ್ಷಪೂರ್ತಿ ನಡೆಯುವ ಕಾರ್ಯಕ್ರಮವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ವಂದೇ ಮಾತರಂ' ಗೀತೆಯ ೧೫೦ನೇ ವಾರ್ಷಿಕೋತ್ಸವದ ಪ್ರಯುಕ್ತ ಬೆಂಗಳೂರಿನ ಬಿಜೆಪಿ ಕಛೇರಿಯಲ್ಲಿ ಇಂದು ಸಾಮೂಹಿಕ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಉಪಮುಖ್ಯಮಂತ್ರಿಗಳಾದ ಸಂಸದ ಗೋವಿಂದ ಕಾರಜೋಳ, ಡಾ.ಸಿ.ಎನ್.ಅಶ್ವತ್ಥನಾರಾಯಣ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಪಿ.ಸಿ. ಮೋಹನ್, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್, ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು. ಮೈಸೂರಿನ ಬಿ.ಎಂ.ಎಲ್ ಕಾರ್ಖಾನೆಯಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹಾಗೂ ಕಾರ್ಖಾನೆಯ ಸಿಬ್ಬಂದಿ ವಂದೇ ಮಾತರಂ ಗೀತೆ ಹಾಡಿದರು. ನಂತರ ಮಾತನಾಡಿದ ಕುಮಾರಸ್ವಾಮಿ, ದೇಶದ ಐಕ್ಯತೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಹಮ್ಮಿಕೊಂಡಿರುವ ಈ ಕಾರ್ಯಕ್ರಮ ಎಲ್ಲರಲ್ಲೂ ಐಕ್ಯತೆ ಮೂಡಿಸಲು ಸಹಕಾರಿಯಾಗುತ್ತಿದೆ ಎಂದು ತಿಳಿಸಿದರು. ಬೆಂಗಳೂರು ಆಕಾಶವಾಣಿಯಲ್ಲಿಯೂ ಇಂದು

ಸಾಮೂಹಿಕವಾಗಿ ವಂದೇ ಮಾತರಂ ಗೀತೆ ಹಾಡಲಾಯಿತು. ಆಕಾಶವಾಣಿಯ ಉಪ ಮಹಾನಿರ್ದೇಶಕರಾದ ಪಿ.ಸಂಜೀವ್ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು. ಬೆಂಗಳೂರಿನ ಕಾಫಿ ಸಂಶೋಧನಾ ಕೇಂದ್ರದಲ್ಲಿಯೂ ಸಾಮೂಹಿಕ ವಂದೇ ಮಾತರಂ ಗೀತೆ ಹಾಡಲಾಯಿತು. ಬೆಂಗಳೂರಿನ ರೇಷ್ಮೆ ಸಂಶೋಧನಾ ಮಂಡಳಿಯಲ್ಲಿ ನಡೆದ ವಂದೇ ಮಾತರಂ ಗೀತ ಗಾಯನ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು. ಕೊಪ್ಪಳ ಜಿಲ್ಲಾಡಳಿತದಿಂದಲೂ "ವಂದೇ ಮಾತರಂ ಸಾಮೂಹಿಕ ಗಾಯನ ಕಾರ್ಯಕ್ರಮ" ನಡೆಯಿತು. ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಮಾತನಾಡಿ ಸಾಮೂಹಿಕ ಗೀತ ಗಾಯನದ ಮೂಲಕ ಏಕತೆ ಮತ್ತು ಐಕ್ಯತೆ ತಿಳಿಸುವ ಕೆಲಸವಾಗಿದೆ ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರಣ್ ಕುಮಾರ್ ಮಾತನಾಡಿ, ಯುವ ಪೀಳಿಗೆಗೆ ದೇಶಭಕ್ತಿಯನ್ನು ತಿಳಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

**ಧ್ವನಿ: ಕರಣ್ ಕುಮಾರ್ ( ೩೧ ಸೆಕೆಂಡ್ಸ್)**

**<><><><>**

ದೇಶದ ಮೊದಲ ಗೃಹಸಚಿವ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯನ್ನು 'ಏಕತಾ ಜಾಥಾ' ಎಂದು ಆಚರಿಸಲಾಗುತ್ತಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರದ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಈ ಏಕತಾ ಜಾಥಾ ಸ್ವಾತಂತ್ರ್ಯ ಹೋರಾಟ ಹಾಗೂ ಸ್ವಾತಂತ್ರ್ಯ ಹೋರಾಟದ ಬಳಿಕ ಯಾವ ರೀತಿ ದೇಶದ ಏಕತೆಗಾಗಿ ವಲ್ಲಭಭಾಯ್ ಪಟೇಲ್ ಹೋರಾಡಿದರು ಎಂಬ ಬಗ್ಗೆ ಯುವ ಜನತೆಗೆ ತಿಳಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಶೋಭ ಕರಂದ್ಲಾಜೆ ( ೩೦ ಸೆಕೆಂಡ್ಸ್ )**

**<><>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>**

**<><>ನಮ್ಮ ಮುಂದಿನ ವಾರ್ತಾಪ್ರಸಾರ ಸಂಜೆ ೬.೪೦ ಕ್ಕೆ<><>**